# All India Radio: Bangalore
# National Bulletin In Kannada
# 08.04.2025  07.35 a.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

***************

ಮುಖ್ಯಾಂಶಗಳು

೧. ಪಿಎಂ ಮುದ್ರಾ ಯೋಜನೆಗೆ ೧೦ ವರ್ಷ; ಫಲಾನುಭವಿಗಳೊಂದಿಗೆ ಇಂದು ಪ್ರಧಾನಿ ನರೇಂದ್ರ ಮೋದಿ ಸಂವಾದ

೨. ಇಂದಿನಿಂದ ಬ್ರಿಟನ್, ಆಸ್ಟ್ರೀಯಾಕ್ಕೆ ಭೇಟಿ ನೀಡಲಿರುವ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್

೩. ಸಹಕಾರಿ ವಲಯದ ಹಣ ದುರುಪಯೋಗ ಪ್ರಕರಣ; ನೇಪಾಳ ಉಪಪ್ರಧಾನಿ ರಬಿ ಲಾಮಿಚಾನೆ ಬಂಧನ

೪. ಐಪಿಎಲ್ ಕ್ರಿಕೆಟ್; ಮುಂಬೈ ಇಂಡಿಯನ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್‌ಗೆ ೧೨ ರನ್‌ಗಳ ಅಂತರದ ಗೆಲುವು

***************

ಪಿಎಂ ಮುದ್ರಾ ಯೋಜನೆ ಜಾರಿಯಾಗಿ ಇಂದಿಗೆ ೧೦ ವರ್ಷ ಪೂರ್ಣಗೊಂಡಿದೆ. ೨೦೧೫ರ ಏಪ್ರಿಲ್ ೮ ರಂದು ಈ ಯೋಜನೆ ಜಾರಿಗೊಳಿಸಲಾಗಿತ್ತು. ಈವರೆಗೆ ೫೨ ಕೋಟಿಗೂ ಅಧಿಕ ಮಂದಿಗೆ, ೩೨ ಕೋಟಿ ೬೧ ಲಕ್ಷ ರೂಪಾಯಿ ಮೊತ್ತದ ಸಾಲ ಸೌಲಭ್ಯ ಒದಗಿಸಲಾಗಿದೆ.

ಉದ್ಯೋಗ ಒದಗಿಸುವ ಹಾಗೂ ಉದ್ಯಮಿಗಳನ್ನು ರೂಪಿಸುವ ಉದ್ದೇಶದಿಂದ ಪಿಎಂ ಮುದ್ರಾ ಯೋಜನೆ ಜಾರಿಗೆ ತರಲಾಗಿತ್ತು. ನಗರ, ಸಣ್ಣ ಪಟ್ಟಣಗಳು, ಹಳ್ಳಿಗಳಲ್ಲಿ ಕೋಟ್ಯಾಂತರ ಮಂದಿ ಉದ್ಯಮಿಗಳಾಗಿ ರೂಪುಗೊಂಡಿದ್ದಾರೆ. ಶಿಶು ಯೋಜನೆಯಡಿ ಗರಿಷ್ಠ ೫೦ ಸಾವಿರ ರೂಪಾಯಿ, ಕಿಶೋರ್ ಯೋಜನೆಯಡಿ ಗರಿಷ್ಠ ೫ ಲಕ್ಷ ರೂಪಾಯಿ, ತರುಣ್ ಯೋಜನೆಯಡಿ ೧೦ ಲಕ್ಷ ರೂಪಾಯಿ ಸಾಲ ಒದಗಿಸುತ್ತಿದ್ದು, ಇದೀಗ ತರುಣ್ ಪ್ಲಸ್ ಎಂಬ ಸಾಲ ಯೋಜನೆಯನ್ನು ಜಾರಿಗೆ ತಂದಿದ್ದು, ಗರಿಷ್ಠ ೨೦ ಲಕ್ಷ ರೂಪಾಯಿವರೆಗೆ ಸಾಲ ಸೌಲಭ್ಯ ಒದಗಿಸಲಾಗುತ್ತಿದೆ.

ಇಂದು ಬೆಳಗ್ಗೆ ೬ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ಮುದ್ರಾ ಯೋಜನೆಯ ಫಲಾನುಭವಿಗಳೊಂದಿಗೆ ವಿಡಿಯೊ ಸಂವಾದ ನಡೆಸಲಿದ್ದಾರೆ.

***************

ನವದೆಹಲಿಯಲ್ಲಿ ನಾಳೆ ನಡೆಯಲಿರುವ ನವಕರ್ ಮಹಾಮಂತ್ರ ದಿವಸ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ ಅವರು ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ.

ನವಕರ್ ಮಹಾಮಂತ್ರ ದಿವಸ್ ಎಂಬುದು ಜೈನ ಧರ್ಮದ ಅತ್ಯಂತ ಗೌರವಾನ್ವಿತ ಮತ್ತು ಸಾರ್ವತ್ರಿಕ ಮಂತ್ರವಾದ ನವಕರ್ ಮಹಾಮಂತ್ರದ ಸಾಮೂಹಿಕ ಪಠಣದ ಮೂಲಕ, ಜನರನ್ನು ಒಗ್ಗೂಡಿಸಲು ಪ್ರಯತ್ನಿಸುವ, ಆಧ್ಯಾತ್ಮಿಕ ಸಾಮರಸ್ಯ ಮತ್ತು ನೈತಿಕ ಪ್ರಜ್ಞೆಯ ಸ್ಮರಣೀಯ ಆಚರಣೆಯಾಗಿದೆ.

***************

ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಇಂದಿನಿಂದ ಇದೇ ೧೩ ರವರೆಗೆ ಬ್ರಿಟನ್ ಮತ್ತು ಆಸ್ಟ್ರಿಯಾಕ್ಕೆ ಭೇಟಿ ನೀಡಲಿದ್ದಾರೆ. ಈ ವೇಳೆ, ಎರಡೂ ದೇಶಗಳಲ್ಲಿ ಸಚಿವ ಮಟ್ಟದ ದ್ವಿಪಕ್ಷೀಯ ಸಭೆಗಳಲ್ಲಿ ಭಾಗವಹಿಸಲಿದ್ದಾರೆ.

ಸಚಿವರು ತಮ್ಮ ಭೇಟಿಯ ವೇಳೆ ನಾಳೆ ೧೩ನೇ ಸುತ್ತಿನ ಭಾರತ - ಬ್ರಿಟನ್ ಆರ್ಥಿಕ ಮತ್ತು ಹಣಕಾಸು ಸಂವಾದದಲ್ಲಿ ಭಾಗವಹಿಸಲಿದ್ದಾರೆ ಮತ್ತು ಯುನೈಟೆಡ್ ಕಿಂಗ್‌ಡಮ್ ಮತ್ತು ಆಸ್ಟ್ರಿಯಾದಲ್ಲಿನ ಚಿಂತಕರು, ಹೂಡಿಕೆದಾರರು, ವಾಣಿಜ್ಯ ನಾಯಕರೊಂದಿಗೆ ಮಾತುಕತೆ ನಡೆಸಲಿದ್ದಾರೆ.

ಬ್ರಿಟನ್ ನಲ್ಲಿ ಕೇಂದ್ರ ಹಣಕಾಸು ಸಚಿವರು ಭಾರತ-ಯುಕೆ ಹೂಡಿಕೆದಾರರ ದುಂಡುಮೇಜಿನ ಸಭೆಯಲ್ಲಿ ಅಂತಾರಾಷ್ಟ್ರೀಯ ಸಂಸ್ಥೆಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಸಮ್ಮುಖದಲ್ಲಿ ಪ್ರಾಸ್ತಾವಿಕ ಭಾಷಣ ಮಾಡಲಿದ್ದಾರೆ. ಅದರಲ್ಲಿ ಪಿಂಚಣಿ ನಿಧಿಗಳು, ವಿಮಾ ಕಂಪನಿಗಳು, ಬ್ಯಾಂಕುಗಳು ಮತ್ತು ಹಣಕಾಸು ಸೇವಾ ಸಂಸ್ಥೆಗಳನ್ನು ಒಳಗೊಂಡ ಯುಕೆ ಹಣಕಾಸು ಪರಿಸರ ವ್ಯವಸ್ಥೆಯ ಪ್ರಮುಖ ನಿರ್ವಹಣಾ ಸಿಬ್ಬಂದಿ ಸೇರಿ ಮತ್ತಿತರರು ಭಾಗವಹಿಸಲಿದ್ದಾರೆ.

ಆಸ್ಟ್ರಿಯ ಭೇಟಿಯ ಸಮಯದಲ್ಲಿ ಆಸ್ಟ್ರಿಯಾದ ಹಣಕಾಸು ಸಚಿವರಾದ ಶ್ರೀ ಮಾರ್ಕಸ್ ಮಾರ್ಟರ್‌ಬೌರ್ ಮತ್ತು ಆಸ್ಟ್ರಿಯಾದ ಫೆಡರಲ್ ಚಾನ್ಸೆಲರ್ ಕ್ರಿಶ್ಚಿಯನ್ ಸ್ಟಾಕರ್ ಸೇರಿದಂತೆ ಹಿರಿಯ ಆಸ್ಟ್ರಿಯನ್ ಸರ್ಕಾರಿ ನಾಯಕರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ.

***************

ರಾಷ್ಟ್ರಪತಿ ದ್ರೌಪದಿ ಮುರ್ಮು ನಿನ್ನೆ ಲಿಸ್ಬನ್‌ನಲ್ಲಿ ಪೋರ್ಚುಗಲ್ ಪ್ರಧಾನಿ ಮಾರ್ಸೆಲೊ ರೆಬೊಲೊ ಡಿ ಸೌಸಾ ಅವರೊಂದಿಗೆ ನಿಯೋಗ ಮಟ್ಟದ ಮಾತುಕತೆ ನಡೆಸಿದರು.

ಸಭೆಯ ನಂತರ ಜಂಟಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ರಾಷ್ಟ್ರಪತಿ ದ್ರೌಪದಿ ಮುರ್ಮು, ಭಾರತ-ಪೋರ್ಚುಗಲ್ ಸಂಬಂಧ ಐತಿಹಾಸಿಕವಾದುದು. ಇದನ್ನು ಈಗ ಆಧುನಿಕ ಮತ್ತು ಬಹು ಆಯಾಮದ ಪಾಲುದಾರಿಕೆಯಾಗಿ ಅಭಿವೃದ್ಧಿಪಡಿಸಲಾಗುತ್ತಿದೆ.

ಸಭೆಯಲ್ಲಿ ಉಭಯ ದೇಶಗಳ ನಡುವೆ ವಿವಿಧ ಕ್ಷೇತ್ರಕ್ಕೆ ಸಂಬಂಧಿಸಿದಂತೆ ರಚನಾತ್ಮಕ ಮಾತುಕತೆಯನ್ನು ನಡೆಸಲಾಯಿತು ಎಂದರು.

***************

ಸಹಕಾರಿ ವಲಯದ ಹಣ ದುರುಪಯೋಗದ ಆರೋಪ ಎದುರಿಸುತ್ತಿರುವ ನೇಪಾಳದ ಉಪ ಪ್ರಧಾನಿ ರಬಿ ಲಾಮಿಚಾನೆ ಅವರನ್ನು ಬಂಧಿಸಲಾಗಿದೆ. ಅವರನ್ನು ರುಪೆಂಡೇಹಿ ಬಂಧಿಖಾನೆಗೆ ಕಳುಹಿಸಲಾಗಿದೆ.

ಅಲ್ಲಿನ ಜಿಲ್ಲಾ ನ್ಯಾಯಾಲಯ ಅವರಿಗೆ ಜಾಮೀನು ನಿರಾಕರಿಸಿದ ಹಿನ್ನೆಲೆಯಲ್ಲಿ ಬಂಧನಕ್ಕೆ ಒಳಗಾಗಿದ್ದಾರೆ.

***************

ದೇಶದಲ್ಲಿ ಎಲ್‌ಪಿಜಿ ಸಿಲಿಂಡರ್ ಬೆಲೆಯನ್ನು ೫೦ ರೂಪಾಯಿ ಏರಿಸಲಾಗಿದೆ. ನೂತನ ದರ ಇಂದಿನಿಂದ ಜಾರಿಗೆ ಬರಲಿದೆ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ತಿಳಿಸಿದ್ದಾರೆ.

ಇನ್ನೊಂದೆಡೆ, ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅಬಕಾರಿ ಸುಂಕವನ್ನು ತಲಾ ೨ ರೂಪಾಯಿ ಹೆಚ್ಚಿಸಲಾಗಿದೆ. ಆದರೆ, ಇದು ಸಾರ್ವಜನಿಕರ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ. ಹೆಚ್ಚುವರಿ ಅಬಕಾರಿ ಸುಂಕವನ್ನು ತೈಲ ಕಂಪನಿಗಳು ಭರಿಸಲಿವೆ. ಇದು ಕೂಡ ಇಂದಿನಿಂದ ಜಾರಿಗೆ ಬರಲಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

***************

ದುಬೈ ರಾಜಕುಮಾರ, ಉಪಪ್ರಧಾನಿ ಮತ್ತು ಯುಎಇ ರಕ್ಷಣಾ ಸಚಿವ ಶೇಖ್ ಹಮ್ದಾನ್ ಬಿನ್ ಮೊಹಮ್ಮದ್ ಅಲ್ ಮಕ್ತೌಮ್ ಇಂದಿನಿಂದ ಭಾರತಕ್ಕೆ ಎರಡು ದಿನಗಳ ಭೇಟಿ ನೀಡಲಿದ್ದಾರೆ.

ದುಬೈ ರಾಜಕುಮಾರನಾಗಿ ಇದು ಅವರ ಮೊದಲ ಅಧಿಕೃತ ಭಾರತ ಭೇಟಿಯಾಗಿದೆ. ಅವರೊಂದಿಗೆ ದುಬೈನ ಹಲವು ಸಚಿವರು, ಹಿರಿಯ ಸರ್ಕಾರಿ ಅಧಿಕಾರಿಗಳು ಮತ್ತು ಉನ್ನತ ಮಟ್ಟದ ಉದ್ಯಮಿಗಳ ನಿಯೋಗ ಭಾರತಕ್ಕೆ ಆಗಮಿಸಲಿದ್ದಾರೆ.

***************

ಎಐಸಿಸಿಯ ೮೪ ನೇ ರಾಷ್ಟ್ರೀಯ ಸಮಾವೇಶ ಇಂದು ಗುಜರಾತ್‌ನ ಅಹಮದಾಬಾದ್‌ನಲ್ಲಿ ಪ್ರಾರಂಭವಾಗಲಿದೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೇತೃತ್ವದಲ್ಲಿ ನಡೆಯಲಿರುವ ಕಾಂಗ್ರೆಸ್ ಸಮಾವೇಶದಲ್ಲಿ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ, ಹಿರಿಯ ಕಾಂಗ್ರೆಸ್ ನಾಯಕಿ ಸೋನಿಯಾಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಮತ್ತಿತರರು ಪಾಲ್ಗೊಳ್ಳಲಿದ್ದಾರೆ.

***************

ಚೀನಾ ತನ್ನ ಪ್ರತಿಕ್ರಮವನ್ನು ಹಿಂತೆಗೆದುಕೊಳ್ಳದಿದ್ದಲ್ಲಿ, ಅಮೆರಿಕಕ್ಕೆ ಆಮದು ಮಾಡಿಕೊಳ್ಳುವ ಚೀನಾದ ಸರಕುಗಳ ಮೇಲೆ, ಹೆಚ್ಚುವರಿಯಾಗಿ ಶೇಕಡ ೫೦ ರಷ್ಟು ಸುಂಕವನ್ನು ಜಾರಿಗೆ ತರುವುದಾಗಿ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ. ತಮ್ಮ ಸಾಮಾಜಿಕ ಮಾಧ್ಯಮ ವೇದಿಕೆಯಾದ ಟ್ರೂತ್ ಸೋಷಿಯಲ್ ಪೋಸ್ಟ್‌ನಲ್ಲಿ, ಚೀನಾ ಇಂದು ಅಮೆರಿಕದ ಉತ್ಪನ್ನಗಳ ಮೇಲಿನ ಶೇಕಡ ೩೪ ರಷ್ಟು ಪ್ರತಿ-ಸುಂಕವನ್ನು ತೆಗೆದುಹಾಕದಿದ್ದರೆ, ಚೀನಾದ ಸರಕುಗಳ ಮೇಲೆ ಹೆಚ್ಚುವರಿ ಸುಂಕವನ್ನು ವಿಧಿಸಲಾಗುವುದು ಎಂದು ಟ್ರಂಪ್ ಹೇಳಿದ್ದಾರೆ.

ನಾಳೆಯ ಒಳಗೆ, ಟ್ರಂಪ್ ತಮ್ಮ "ವಿಮೋಚನಾ ದಿನದ" ಭಾಗವಾಗಿ ಚೀನಾದ ಆಮದುಗಳ ಮೇಲೆ ಶೇಕಡ ೩೪ ರಷ್ಟು ತೆರಿಗೆಯನ್ನು ವಿಧಿಸುವುದಾಗಿ ಘೋಷಿಸಿದ್ದಾರೆ. ಅಮೆರಿಕದ ಬಹುತೇಕ ಎಲ್ಲಾ ವ್ಯಾಪಾರ ಪಾಲುದಾರರ ಮೇಲೆ ಕನಿಷ್ಠ ಶೇಕಡ ೧೦ ರಷ್ಟು ತೆರಿಗೆಯನ್ನು ವಿಧಿಸಿದೆ. ಹೆಚ್ಚುವರಿ ಸುಂಕಗಳೊಂದಿಗೆ ಅಮೆರಿಕದ ವಿರುದ್ಧ ಪ್ರತೀಕಾರ ತೀರಿಸಿಕೊಳ್ಳುವ ಯಾವುದೇ ದೇಶವು, ಪ್ರತಿಕ್ರಿಯೆಯಾಗಿ ಹೊಸ ಮತ್ತು ಗಮನಾರ್ಹವಾಗಿ ಹೆಚ್ಚಿನ ಸುಂಕಗಳನ್ನು ಎದುರಿಸಬೇಕಾಗುತ್ತದೆ ಎಂಬ ಎಚ್ಚರಿಕೆಯ ಹೊರತಾಗಿಯೂ, ಚೀನಾ ತನ್ನ ಪ್ರತಿಕ್ರಮವನ್ನು ಜಾರಿಗೆ ತಂದಿದ್ದಕ್ಕಾಗಿ ಟ್ರಂಪ್ ಟೀಕಿಸಿದ್ದಾರೆ. ಇದಕ್ಕೆ ಉತ್ತರವಾಗಿ, ಚೀನಾದ ಮೇಲೆ ಒತ್ತಡ ಹೇರುವುದು ಅಥವಾ ಬೆದರಿಕೆ ಹಾಕುವುದು ಸರಿಯಾದ ಮಾರ್ಗವಲ್ಲ ಎಂದು ಬೀಜಿಂಗ್ ವಾದಿಸಿದೆ.

***************

ಅಮೆರಿಕ ತನ್ನ ಪರಮಾಣು ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಇರಾನ್ ಜೊತೆ ನೇರ ಮಾತುಕತೆ ನಡೆಸಲಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಮಾತುಕತೆ ವಿಫಲವಾದರೆ ಅದು ಗಮನಾರ್ಹ ಅಪಾಯವನ್ನು ಎದುರಿಸಬೇಕಾಗುತ್ತದೆ ಎಂದು ಟೆಹ್ರಾನ್‌ಗೆ ಎಚ್ಚರಿಕೆಯನ್ನೂ ನೀಡಿದ್ದಾರೆ.

ನಿನ್ನೆ ಓವಲ್ ಕಚೇರಿಯಲ್ಲಿ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರೊಂದಿಗೆ ಮಾತನಾಡಿದ ಟ್ರಂಪ್, ಶನಿವಾರ ಮಾತುಕತೆಗಳು ಪ್ರಾರಂಭವಾಗಲಿವೆ. ಟೆಹ್ರಾನ್, ಪರಮಾಣು ಶಸ್ತ್ರಾಸ್ತ್ರಗಳನ್ನು ಅಭಿವೃದ್ಧಿಪಡಿಸಲು ಅವಕಾಶ ನೀಡಬಾರದು ಎಂದರು.

***************

೨೦೨೪ ರ ಜನಗಣತಿಯ ಪ್ರಕಾರ ಶ್ರೀಲಂಕಾದ ಜನಸಂಖ್ಯೆ ೨ ಕೋಟಿ ೧೭ ಲಕ್ಷಕ್ಕೆ ತಲುಪಿದೆ.

ಇದು ೨೦೧೨ ರ ಕೊನೆಯ ಜನಗಣತಿಗಿಂತ ೧೪ ಲಕ್ಷಕ್ಕೂ ಅಧಿಕ ಹೆಚ್ಚಳ ಕಂಡಿದೆ ಎಂದು ಜನಗಣತಿ ಮತ್ತು ಅಂಕಿಅಂಶ ಇಲಾಖೆ ತಿಳಿಸಿದೆ.

***************

೨೦೦೮ ರ ಮುಂಬೈ ಭಯೋತ್ಪಾದಕ ದಾಳಿಯ ಆರೋಪಿ ತಹವ್ವೂರ್ ರಾಣಾ ಅವರನ್ನು ಭಾರತಕ್ಕೆ ಹಸ್ತಾಂತರಿಸುವುದನ್ನು ತಡೆಯುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಅಮೆರಿಕ ಸುಪ್ರೀಂ ಕೋರ್ಟ್ ತಿರಸ್ಕರಿಸಿದೆ.

ಪಾಕಿಸ್ತಾನಿ ಮೂಲದ ಕೆನಡಾದ ಪ್ರಜೆ ರಾಣಾ ಪ್ರಸ್ತುತ ಲಾಸ್ ಏಂಜಲೀಸ್‌ನ ಮೆಟ್ರೋಪಾಲಿಟನ್ ಬಂಧನ ಕೇಂದ್ರದಲ್ಲಿದ್ದಾರೆ. ಈ ವರ್ಷ ಫೆಬ್ರವರಿ ೨೭ ರಂದು ಅವರು ತಮ್ಮನ್ನು ಭಾರತಕ್ಕೆ ಹಸ್ತಾಂತರಿಸಬಾರದು ಎಂದು ಅರ್ಜಿ ಸಲ್ಲಿಸಿದ್ದರು.

***************

ಪ್ರಧಾನಿ ನರೇಂದ್ರ ಮೋದಿ ಅವರು ಈ ತಿಂಗಳ ೨೭ರಂದು ಆಕಾಶವಾಣಿ ಮೂಲಕ ಪ್ರಸಾರವಾಗುವ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ದೇಶ-ವಿದೇಶಗಳ ಜನರೊಂದಿಗೆ ತಮ್ಮ ಆಲೋಚನೆಗಳನ್ನು ಹಂಚಿಕೊಳ್ಳಲಿದ್ದಾರೆ.

***************

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಇಂಡಿಯನ್ ಪ್ರಿಮೀಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ವಿರುದ್ಧ  ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ೧೨ ರನ್ ಗಳ ಅಂತರದಿಂದ ರೋಚಕ ಗೆಲುವು ಸಾಧಿಸಿದೆ.

ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿತು. ಆರ್.ಸಿ.ಬಿ ನಿಗದಿತ ೨೦ ಓವರ್ ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೨೨೧ ರನ್ ಗಳಿಸಿತು. ನಾಯಕ ರಜತ್ ಪಾಟಿದಾರ್ ೩೨ ಎಸೆತಗಳಲ್ಲಿ ೬೪ ರನ್ ಸಿಡಿಸಿದರು.  ಉತ್ತಮ ಪ್ರದರ್ಶನ ನೀಡಿದ ಪಾಟೀದಾರ್ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಪಾತ್ರರಾದರು.

ಗೆಲುವಿನ ಗುರಿ ಬೆನ್ನತ್ತಿದ ಮುಂಬೈ ತಂಡ ೯ ವಿಕೆಟ್ ಕಳೆದುಕೊಂಡು ೨೦೯ ರನ್ ಗಳಿಸಿ ಸೋಲೊಪ್ಪಿಕೊಂಡಿತು.

ಇಂದು ಕೊಲ್ಕತ್ತಾದಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ಮತ್ತು ಲಖನೌ ಸೂಪರ್ ಜೇಂಟ್ಸ್ ತಂಡಗಳು ಮುಖಾಮುಖಿಯಾಗಲಿದ್ದು, ಪಂದ್ಯ ೩.೩೦ ಕ್ಕೆ ಪ್ರಾರಂಭವಾಗಲಿದೆ.

ರಾತ್ರಿ ೭.೩೦ಕ್ಕೆ ಚಂಡಿಘಡದ ಮಹಾರಾಜ ಯದುವಿಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯಲಿರುವ ಮತ್ತೊಂದು ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಮತ್ತು ಪಂಜಾಬ್ ಕಿಂಗ್ಸ್ ತಂಡಗಳು ಸೆಣಸಲಿವೆ.

***************